**All India Radio: Bangalore**
**National Bulletin In Kannada**
**06.12.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.12.2025 1.10 p.m.**

**<><><><>**

ಮುಖ್ಯಾಂಶಗಳು

1. ಭಾರತ - ರಷ್ಯಾ ನಡುವೆ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ - ರಾಷ್ಟ್ರಪತಿ ದ್ರೌಪದಿ ಮುರ್ಮು
2. ದೆಹಲಿ ವಿಮಾನ ಪ್ರಾಧಿಕಾರದಿಂದ ವ್ಯಾಪಕ ಕ್ರಮ; ವಿಮಾನ ಸಂಚಾರ ಸೇವೆಯಲ್ಲಿ ಸುಧಾರಣೆ
3. ಇಂದು ನಿಮ್ಹಾನ್ಸ್‌ನ ೨೮ನೇ ಘಟಿಕೋತ್ಸವ; ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾಗಿ
4. ಇಂದು ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ಅವರ ೭೦ನೇ ಮಹಾ ಪರಿನಿರ್ವಾಣ ದಿನ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಅವರಿಂದ ಗೌರವ ನಮನ
5. ಏಕದಿನ ಕ್ರಿಕೆಟ್; ಮೂರನೇ ಪಂದ್ಯದಲ್ಲಿ ಇಂದು ಭಾರತ-ದಕ್ಷಿಣ ಆಫ್ರಿಕಾ ಮುಖಾಮುಖಿ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಭಾರತ ಪ್ರವಾಸದಲ್ಲಿದ್ದ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ನಿನ್ನೆ ಔತಣಕೂಟ ಏರ್ಪಡಿಸಿದ್ದರು. ಈ ವೇಳೆ ಭಾರತ-ರಷ್ಯಾ ಕಾರ್ಯತಂತ್ರ ಪಾಲುದಾರಿಕೆಯ ೨೫ ನೇ ವಾರ್ಷಿಕೋತ್ಸವ ಕುರಿತು ಎರಡೂ ದೇಶಗಳ ನಡುವಿನ ಕಾರ್ಯತಂತ್ರ ಬಗ್ಗೆ ಉಭಯ ನಾಯಕರು ಸಮಾಲೋಚನೆ ನಡೆಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು, ಉನ್ನತ ಮಟ್ಟದ ರಾಜಕೀಯ ವಿನಿಮಯ, ವ್ಯಾಪಾರ, ಆರ್ಥಿಕತೆ, ರಕ್ಷಣೆ, ನಾಗರಿಕ ಪರಮಾಣು ಸಹಕಾರ, ಬಾಹ್ಯಾಕಾಶ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಜನರಿಂದ ಜನರ ನಡುವಿನ ಸಂಪರ್ಕ ಸೇರಿದಂತೆ, ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಕಂಡಿದೆ ಎಂದು ಹೇಳಿದರು. ಭಾರತ ಮತ್ತು ರಷ್ಯಾ ನಡುವಿನ ಹಲವು ವರ್ಷಗಳಿಂದ ದೃಢವಾಗಿರುವ ಸ್ನೇಹ, ಮುಂದೆಯೂ

ಮುಂದುವರಿಯುತ್ತದೆ ಎಂಬ ವಿಶ್ವಾಸವನ್ನು ಉಭಯ ಮುಖಂಡರು ವ್ಯಕ್ತಪಡಿಸಿದರು. ಎರಡು ದಿನಗಳ ಪ್ರವಾಸ ಮುಗಿಸಿ, ವ್ಲಾಡಿಮಿರ್ ಪುಟಿನ್, ರಷ್ಯಾಗೆ ಹಿಂದಿರುಗಿದರು.

<><><>

ವಿಮಾನಯಾನ ಸೇವೆ ಕ್ರಮೇಣವಾಗಿ ಸುಧಾರಿಸುತ್ತಿದೆ. ವಿಮಾನ ಸಂಚಾರದಲ್ಲಿ ಉಂಟಾಗಿದ್ದ ಅಡಚಣೆ ಬಗೆಹರಿಯುತ್ತಿದೆ ಎಂದು ದೆಹಲಿ ವಿಮಾನಯಾನ ಪ್ರಾಧಿಕಾರ ತಿಳಿಸಿದೆ.

ಪ್ರಯಾಣಿಕರು ಆತಂಕಗೊಳ್ಳುವ ಅಗತ್ಯವಿಲ್ಲ. ವಿಮಾನ ನಿಲ್ದಾಣವನ್ನು ತೊರೆಯುವ ಮುನ್ನ ಇತ್ತೀಚಿನ ಮಾಹಿತಿಯನ್ನು ಆನ್‌ಲೈನ್ ಮೂಲಕ ಪರಿಶೀಲನೆ ಮಾಡಿಕೊಳ್ಳಬೇಕು ಎಂದು ಹೇಳಿದೆ. ವಿಮಾನ ನಿಲ್ದಾಣ ಪ್ರಾಧಿಕಾರ ಸಂಬಂಧಪಟ್ಟವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸುಗಮ ಪ್ರಯಾಣಕ್ಕೆ ಎಲ್ಲಾ ರೀತಿಯ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ತಿಳಿಸಿದೆ.

<><><>

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ - ನಿಮ್ಹಾನ್ಸ್‌ನ ೨೮ನೇ ಘಟಿಕೋತ್ಸವ ಇಂದು ಸಂಜೆ ನಡೆಯಲಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ೨೫೧ ವಿದ್ಯಾರ್ಥಿಗಳು ವಿವಿಧ ಪದವಿಗಳು ಮತ್ತು ಪ್ರಮಾಣ ಪತ್ರಗಳನ್ನು ಸ್ವೀಕರಿಸಲಿದ್ದಾರೆ. ೨೮ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಶ್ರೇಷ್ಠತಾ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

<><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಗುಜರಾತ್‌ನ ಬನಾಸ್ ಡೈರಿಯಲ್ಲಿ, ಸಹಕಾರ ಸಚಿವಾಲಯದ ಸಂಸದೀಯ ಸಲಹಾ ಸಮಿತಿಯ ಮೂರನೇ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ವೇಳೆ ಅವರು, ಸಾನಂದರ್‌ನಲ್ಲಿರುವ, ಬನಾಸ್ ಡೈರಿಯ ಬಯೋ-ಸಿಎನ್‌ಜಿ ಮತ್ತು ಗೊಬ್ಬರ ಘಟಕವನ್ನು ಉದ್ಘಾಟಿಸಲಿದ್ದಾರೆ.  ಅಲ್ಲದೆ, ಸಾನಂದರ್‌ನಲ್ಲಿ ನಿರ್ಮಿಸಲಾಗುವ ಅತ್ಯಾಧುನಿಕ ೧೫೦ ಟಿಪಿಡಿ ಹಾಲಿನ ಪುಡಿ ಮತ್ತು ಶಿಶು ಆಹಾರ ಘಟಕಕ್ಕೆ ಭೂಮಿ ಪೂಜೆ ನೆರವೇರಿಸಲಿದ್ದಾರೆ. ಬಳಿಕ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಂಸದೀಯ ಸಲಹಾ ಸಮಿತಿಯ ಸಭೆಯಲ್ಲಿ, ಬನಾಸ್ ಡೈರಿ ಹಮ್ಮಿಕೊಂಡಿರುವ ವಿವಿಧ ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ. ಈ ವೇಳೆ ಡೈರಿ ಅಭಿವೃದ್ಧಿ,  ಆರ್ಥಿಕತೆ, ಕೃಷಿ ಮೌಲ್ಯವರ್ಧನೆ, ಜಾನುವಾರು ಉತ್ಪಾದಕತೆ, ನೀರಿನ ಸಂರಕ್ಷಣೆ

ಮತ್ತು ಗ್ರಾಮೀಣ ಸಹಕಾರ ಬಲವರ್ಧನೆಯ ಕುರಿತು ಸಚಿವರು ಮಾಹಿತಿ ಪಡೆದುಕೊಳ್ಳಲಿದ್ದಾರೆ. ಈ ನಡುವೆ, ಬನಸ್ಕಾಂತದ ಪಾಲನ್‌ಪುರದಲ್ಲಿನ, ಎಣ್ಣೆ ಗಿರಣಿ, ಹಿಟ್ಟಿನ ಗಿರಣಿ ಮತ್ತು ಜೇನುತುಪ್ಪ ಘಟಕಗಳಿಗೂ ಅಮಿತ್ ಶಾ ಭೇಟಿ ನೀಡಲಿದ್ದಾರೆ.

<><><><>

ಇಂದು ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ೭೦ನೇ ಮಹಾ ಪರಿನಿರ್ವಾಣ ದಿನ.  ಈ ಸಂದರ್ಭದಲ್ಲಿ ದೇಶಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ರಾಷ್ಟ್ರ ನಿರ್ಮಾಣದಲ್ಲಿ ಅಂಬೇಡ್ಕರ್ ಕೊಡುಗೆಯನ್ನು ಸ್ಮರಿಸಲಾಗುತ್ತಿದೆ. ಸಂಸತ್ತಿನ ಪ್ರೇರಣಾ ಸ್ಥಳದಲ್ಲಿ ಭಾರತರತ್ನ ಡಾ. ಅಂಬೇಡ್ಕರ್ ಅವರಿಗೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತಿತರ ಗಣ್ಯರು ಗೌರವ ನಮನ ಸಲ್ಲಿಸಿದರು.  ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಪರವಾಗಿ ಡಾ. ಅಂಬೇಡ್ಕರ್ ಪ್ರತಿಷ್ಠಾನ ಪ್ರತಿ ವರ್ಷ ಮಹಾ ಪರಿನಿರ್ವಾಣ ದಿನವನ್ನು ಆಚರಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಭಾರತದ ರಾಷ್ಟ್ರೀಯಯಾನದಲ್ಲಿ ನ್ಯಾಯ, ಸಮಾನತೆ, ಸಾಂವಿಧಾನಿಕ ಮೌಲ್ಯಗಳ ರಕ್ಷಣೆಗೆ ಡಾ. ಅಂಬೇಡ್ಕರ್ ಅನನ್ಯ ಕೊಡುಗೆ ನೀಡಿದ್ದಾರೆ. ಮಾನವನ ಘನತೆ ಮತ್ತು ಪ್ರಜಾಪ್ರಭುತ್ವದ ಆಧಾರಸ್ಥಂಭಗಳನ್ನು ಬಲಗೊಳಿಸಲು ನಿರಂತರ ಪ್ರಯತ್ನ ಮಾಡಿದ್ದಾರೆ. ಅವರು ಮುಂಬರುವ ಪೀಳಿಗೆಗಳ ಮೇಲೂ ತಮ್ಮ ಪ್ರಭಾವವನ್ನು ಬೀರಲಿದ್ದಾರೆ ಎಂದು ಹೇಳಿದ್ದಾರೆ.

<><><><>

ಡಾ. ಬಿ.ಆರ್. ಅಂಬೇಡ್ಕರ್ ಅವರ ಮಹಾ ಪರಿನಿರ್ವಾಣ ದಿನದ ಹಿನ್ನೆಲೆಯಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಸಂವಿಧಾನ ಶಿಲ್ಪಿಗೆ ಗೌರವ ಸಲ್ಲಿಸಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು ದೇಶದಲ್ಲಿ ಸಮಾನತೆ ತರಲು ಘನತೆ ಮತ್ತು ಭ್ರಾತೃತ್ವ ಭಾವನೆ ಮೂಡಿಸಲು ಅಡಿಪಾಯ ಹಾಕಿದ ಡಾ. ಅಂಬೇಡ್ಕರ್ ಅತ್ಯಂತ ಪ್ರಗತಿಪರ ಮತ್ತು ಎಲ್ಲರನ್ನೊಳಗೊಂಡ ಭಾರತ ನಿರ್ಮಿಸುವ ಶ್ರೇಷ್ಠ ಚಿಂತಕ. ಅವರ ಚಿಂತನೆಗಳು ಮುಂಬರುವ ಪೀಳಿಗೆಗಳನ್ನು ಪ್ರಭಾವಿಸಲಿವೆ ಎಂದು ಹೇಳಿದ್ದಾರೆ.  ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಡಾ. ಅಂಬೇಡ್ಕರ್ ಕಲ್ಯಾಣ ರಾಜ್ಯ ನಿರ್ಮಾಣಕ್ಕೆ ಅಡಿಗಲ್ಲು ಹಾಕಿದ ಹಾಗೂ ನ್ಯಾಯ, ಸಮಾನತೆ,

ಸ್ವಾತಂತ್ರ್ಯ ಮತ್ತು ಹಕ್ಕುಗಳ ರಕ್ಷಣೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಸಾಮಾಜಿಕ ಸಬಲೀಕರಣಕ್ಕೆ ಒತ್ತು ನೀಡಿದ್ದ ಅವರು, ಶ್ರಮಿಕರು, ಮಹಿಳೆಯರು, ಯುವ ಸಮೂಹಕ್ಕೆ ಸ್ಪಷ್ಟ ಸಂದೇಶ ನೀಡಿದ್ದಾರೆ ಎಂದು ಸ್ಮರಿಸಿಕೊಂಡಿದ್ದಾರೆ. ಕೇಂದ್ರ ಸಚಿವ ಅಮಿತ್ ಶಾ, ಡಾ. ಅಂಬೇಡ್ಕರ್ ಅವರು, ಕಾರ್ಮಿಕರು, ರೈತರು ಹಾಗೂ ದುರ್ಬಲ ವರ್ಗಗಳ ಹಕ್ಕುಗಳ ರಕ್ಷಣೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ದೇಶದ ಪ್ರತಿಯೊಬ್ಬರಿಗೂ ಸ್ಫೂರ್ತಿಯ ಸೆಲೆಯಾಗಿದ್ದಾರೆ ಎಂದು ಹೇಳಿದ್ದಾರೆ.

<><><><>

ರಾಜ್ಯ ಸರ್ಕಾರ, ಪ್ರತಿಷ್ಠಿತ ಕರ್ನಾಟಕ ಸಾಂಸ್ಕೃತಿಕ ರಾಜತಾಂತ್ರಿಕ ಕೋಶದ ಸಮಾವೇಶ ಮೂಲಕ, ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೊಸ ಮೈಲುಗಲನ್ನು ಸ್ಥಾಪಿಸಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಪ್ರತಿಪಾದಿಸಿದ್ದಾರೆ. ಪ್ರವಾಸೋದ್ಯಮ ಇಲಾಖೆ ಆಯೋಜಿಸಿದ್ದ ಕರ್ನಾಟಕ ಸಾಂಸ್ಕೃತಿಕ ರಾಜತಾಂತ್ರಿಕ ಕೋಶದ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಸಾಂಸ್ಕೃತಿಕ ಪಾಲುದಾರಿಕೆಗಳು, ಪ್ರವಾಸೋದ್ಯಮ ಪ್ರಚಾರ, ಜ್ಞಾನ ವಿನಿಮಯ  ಹಾಗೂ ಮತ್ತು ವ್ಯಾಪಾರ ಸೌಲಭ್ಯದ ಮೂಲಕ ಕರ್ನಾಟಕ ಮತ್ತು ರಾಜತಾಂತ್ರಿಕ ಕಾರ್ಯಾಚರಣೆಗಳ ನಡುವಿನ ಸಹಯೋಗವನ್ನು ಹೆಚ್ಚಿಸಲು, ಕೆಸಿಸಿಡಿಯನ್ನು ಕಾರ್ಯತಂತ್ರದ ವೇದಿಕೆಯಾಗಿ ರೂಪಿಸಲಾಗಿದೆ ಎಂದು ಹೇಳಿದರು. ರಾಷ್ಟ್ರಗಳ ನಡುವೆ ಶಾಂತಿ, ಸಾಮರಸ್ಯ ಮತ್ತು ಸಾಂಸ್ಕೃತಿಕ ಸೇತುವೆಗಳನ್ನು ನಿರ್ಮಿಸುವಲ್ಲಿ ಪ್ರವಾಸೋದ್ಯಮ ಕ್ಷೇತ್ರ, ಪ್ರಮುಖ ಪಾತ್ರ ವಹಿಸಲಿದೆ. ರಾಜ್ಯದ ಪರಂಪರೆಯನ್ನು ಜ್ಞಾನ, ಸಂವಾದ ಹಾಗೂ  ಸಾರ್ವತ್ರಿಕ ಮಾನವೀಯ ಮೌಲ್ಯಗಳ ತವರೂರಾಗಿದೆ. ಪ್ರವಾಸೋದ್ಯಮ, ಶಾಂತಿ, ಸಾಮರಸ್ಯ ಮತ್ತು ಜ್ಞಾನವನ್ನು ವಖುದ್ಧಿಸುತ್ತದೆ. ಪ್ರವಾಸೋದ್ಯಮ ನೀತಿ ೨೦೨೪-೨೯ರ ಅಡಿಯಲ್ಲಿ, ಸುಸ್ಥಿರ ಅಭಿವೃದ್ಧಿ ಮತ್ತು ಪ್ರತಿಯೊಂದು ಜಿಲ್ಲೆಗೆ ಪ್ರವಾಸೋದ್ಯಮ ಸಮೃದ್ಧಿಯ ಗುರಿ ಹೊಂದಲಾಗಿದೆ ಎಂದು ಅವರು ತಿಳಿಸಿದರು.

<><><><>

ಆಸ್ಟ್ರೇಲಿಯಾದ ಡೀಕಿನ್ ವಿಶ್ವವಿದ್ಯಾಲಯದ ಸಹಭಾಗಿತ್ವದಲ್ಲಿ ಕೃತಕ ಬುದ್ಧಿಮತ್ತೆಯಲ್ಲಿ ಶ್ರೇಷ್ಠತಾ ಕೇಂದ್ರವನ್ನು ಸ್ಥಾಪಿಸುವ ಒಪ್ಪಂದಕ್ಕೆ ತೆಲಂಗಾಣ ಸರ್ಕಾರ ಸಹಿ ಹಾಕಿದೆ. ಸುಧಾರಿತ ಎಐ ಸಾಮರ್ಥ್ಯಗಳಿಗೆ ಮೀಸಲಾಗಿರುವ ದೇಶದಲ್ಲಿ ಇದು ಮೊದಲ ರೀತಿಯ ಕೌಶಲ್ಯ ಅಭಿವೃದ್ಧಿ

ಕೇಂದ್ರವಾಗಿದೆ. ಆಸ್ಟ್ರೇಲಿಯಾದ ಅಂತಾರಾಷ್ಟ್ರೀಯ ಶಿಕ್ಷಣ ಸಚಿವ ಜೂಲಿಯನ್ ಹಿಲ್ ಅವರ ಜೊತೆ ಸುದ್ದಿಗಾರರೊಂದಿಗೆ ಮಾತನಾಡಿದ, ತೆಲಂಗಾಣ ಐಟಿ ಮತ್ತು ಕೈಗಾರಿಕಾ ಸಚಿವ ದುಡ್ಡಿಲ್ಲಾ ಶ್ರೀಧರ್ ಬಾಬು ಅವರು ಒಪ್ಪಂದದ ವಿವರಗಳನ್ನು ಹಂಚಿಕೊಂಡರು.

<><><>

ಹರಿಯಾಣ, ಪಂಜಾಬ್, ದೆಹಲಿ, ಜಾರ್ಖಂಡ್ ಹಾಗೂ ಒಡಿಶಾದಲ್ಲಿ ಶೀತಗಾಳಿ ಮುಂದುವರಿಯಲಿದೆ ಎಂದು ಕೇಂದ್ರ ಹವಾಮಾನ ಇಲಾಖೆ ತಿಳಿಸಿದೆ. ಅಸ್ಸಾಂ, ಮೇಘಾಲಯ, ಹಿಮಾಚಲಪ್ರದೇಶ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರಾದಲ್ಲಿ ದಟ್ಟ ಮಂಜುಕವಿದ ವಾತಾವರಣ ನಿರ್ಮಾಣವಾಗಿದೆ. ತಮಿಳುನಾಡು, ಪುದುಚೇರಿಯಲ್ಲಿ ಗುಡುಗು, ಮಿಂಚು ಸಹಿತ ಮಳೆಯಾಗುವ ನಿರೀಕ್ಷೆ ಇದೆ ಎಂದು ಇಲಾಖೆ ಹೇಳಿದೆ. ದೆಹಲಿಯ ಎನ್‌ಸಿಆರ್ ವಲಯದಲ್ಲಿ ಪ್ರತಿಕೂಲ ಹವಾಮಾನ ಪರಿಸ್ಥಿತಿ ಮುಂದುವರಿದಿದೆ.

<><><>

ವಿಶಾಖಪಟ್ಟಣಂನಲ್ಲಿಂದು ಭಾರತ - ದಕ್ಷಿಣ ಆಫ್ರಿಕಾ ತಂಡಗಳು ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಮುಖಾಮುಖಿಯಾಗಲಿವೆ. ಪಂದ್ಯ ಇಂದು ಮಧ್ಯಾಹ್ನ ೧.೩೦ಕ್ಕೆ ಆರಂಭವಾಗಲಿದೆ. ಉಭಯ ತಂಡಗಳು ತಲಾ ಒಂದೊಂದು ಪಂದ್ಯದಲ್ಲಿ ಗೆದ್ದು, ಸಮಬಲ ಸಾಧಿಸಿದ್ದು, ಮೂರನೇ ಹಾಗೂ ಕೊನೆಯ ಪಂದ್ಯ ತೀವ್ರ ಕುತೂಹಲ ಮೂಡಿಸಿದೆ.

<><><>

ಚಿಲಿಯ ಸ್ಯಾಂಟಿಯಾಗೊದಲ್ಲಿ ನಡೆಯುತ್ತಿರುವ ೨೦೨೫ರ ಮಹಿಳಾ ಎಫ್‌ಐಎಚ್ ಜೂನಿಯರ್ ಹಾಕಿ ವಿಶ್ವಕಪ್‌ನಲ್ಲಿ, ಭಾರತ ತಂಡ ಅದ್ಭುತ ಪ್ರದರ್ಶನ ನೀಡಿದೆ. ಕೊನೆಯ ಲೀಗ್ ಪಂದ್ಯದಲ್ಲಿ ಐರ್ಲೆಂಡ್ ವಿರುದ್ಧ ೪-೦ ಗೋಲುಗಳ ಅಂತರದಿಂದ ಗೆಲುವು ಸಾಧಿಸುವ ಮೂಲಕ ಭಾರತ 'ಗುಂಪು ಸಿ' ಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದೆ. ಈ ಗೆಲುವಿನ ಹೊರತಾಗಿಯೂ, ಭಾರತದ ಕ್ವಾರ್ಟರ್ ಫೈನಲ್ ಪ್ರವೇಶವಿನ್ನೂ ಖಚಿತವಾಗಿಲ್ಲ. ಭಾರತ ತನ್ನ ಪೂಲ್‌ನಲ್ಲಿ ಎರಡು ಪಂದ್ಯಗಳನ್ನು ಗೆದ್ದಿದ್ದು, ಒಂದರಲ್ಲಿ ಸೋಲನುಭವಿಸಿದೆ. ಮುಂದಿನ ಹಂತಕ್ಕೆ ಹೋಗಲು ಭಾರತ ಉಳಿದ ಪಂದ್ಯಗಳ ಫಲಿತಾಂಶಕ್ಕಾಗಿ ಕಾಯಬೇಕಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಯವಾಯಿತು <><>